# Bangalore
# Regional News
# 23.08.2025: 18.40hrs
# ಆಕಾಶವಾಣಿ ಬೆಂಗಳೂರು
# ಪ್ರದೇಶ ಸಮಾಚಾರ

ಮುಖ್ಯಾಂಶಗಳು :

**1.** ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ರೈಲ್ವೆ ಕಾರಿಡಾರ್ ತುಮಕೂರಿನವರೆಗೆ ವಿಸ್ತರಿಸಲು ಯೋಜನೆ - ಕೇಂದ್ರ ಸಚಿವ ವಿ. ಸೋಮಣ್ಣ

**2.** ಇಂದು ರಾಷ್ಟ್ರೀಯ ಬಾಹ್ಯಾಕಾಶ ದಿನ ; ಶಾಲಾ ಮಕ್ಕಳಿಗಾಗಿ ವಿಶೇಷ ಸ್ಪರ್ಧೆ ಆಯೋಜನೆ

**3.** ಬೆಂಗಳೂರಿನಲ್ಲಿಂದು ನಿಮ್ಹಾನ್ಸ್ ವತಿಯಿಂದ ಸಮುದಾಯ ಸಂಪರ್ಕ ೨೦೨೫ರ ಎರಡನೇ ಅಧಿವೇಶನ

**4.** ಪರಿಸರ ಸ್ನೇಹಿ ಗಣೇಶ ಹಬ್ಬ ಆಚರಣೆಗೆ ಜಿಲ್ಲಾಡಳಿತಗಳಿಂದ ಮನವಿ

******

ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ರೈಲ್ವೆ ಕಾರಿಡಾರ್ ಅನ್ನು ತುಮಕೂರಿನವರೆಗೆ ವಿಸ್ತರಿಸಲು ಯೋಜನೆ ರೂಪಿಸಲಾಗಿದೆ ಎಂದು ಕೇಂದ್ರ ಜಲಶಕ್ತಿ, ರೈಲ್ವೆ ಖಾತೆ ರಾಜ್ಯ ಸಚಿವ ವಿ.ಸೋಮಣ್ಣ ತಿಳಿಸಿದ್ದಾರೆ. ಈ ಕುರಿತು ತುಮಕೂರು ನಗರದಲ್ಲಿ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚೆನ್ನೈ-ಬೆಂಗಳೂರು ಎಕ್ಸ್‌ಪ್ರೆಸ್ ರೈಲ್ವೆ ಕಾರಿಡಾರ್ ಯೋಜನೆಯನ್ನು ತುಮಕೂರಿಗೆ ವಿಸ್ತರಿಸಲು ನೀತಿ ಆಯೋಗಕ್ಕೆ ಮನವಿ ಮಾಡಲಾಗಿದೆ ಎಂದು ಹೇಳಿದರು. ೪ ಸಾವಿರದ ೫೦೦ ಕೋಟಿ ರೂಪಾಯಿ ವೆಚ್ಚದ ಹಾಸನ, ತಿಪಟೂರು, ಚಿಕ್ಕನಾಯಕನಹಳ್ಳಿ, ಹಿರಿಯೂರು ಎಕ್ಸ್‌ಪ್ರೆಸ್ ಕಾರಿಡಾರ್ ಯೋಜನೆಯ ಡಿಪಿಆರ್ ಪೂರ್ಣಗೊಂಡಿದ್ದು, ಟೆಂಡರ್ ಪ್ರಕ್ರಿಯೆ ಚಾಲನೆಗೊಂಡಿದೆ. ಬೆಂಗಳೂರು-ತುಮಕೂರು ಚತುಷ್ಪಥ ರೈಲ್ವೆ ಯೋಜನೆಯ ಸರ್ವೆ ಕಾರ್ಯ ಪೂರ್ಣಗೊಂಡಿದ್ದು, ಡಿಪಿಆರ್ ಸಿದ್ಧಪಡಿಸಲಾಗುತ್ತಿದೆ. ಬೆಂಗಳೂರು-ಶಿವಮೊಗ್ಗ ನಡುವಿನ ಹೆದ್ದಾರಿ ಕಾಮಗಾರಿಯನ್ನು ಪೂರ್ಣಗೊಳಿಸಲಾಗುತ್ತಿದ್ದು, ಕ್ಷೇತ್ರ ವ್ಯಾಪ್ತಿಯನ್ನು ಮೀರಿ ರಾಜ್ಯದ ಅಭಿವೃದ್ಧಿಗೆ ಶ್ರಮಿಸಲಾಗುತ್ತಿದೆ ಎಂದು ವಿವರಿಸಿದರು.

******

ದಕ್ಷಿಣ ಕನ್ನಡ ಜಿಲ್ಲೆಯ ಧರ್ಮಸ್ಥಳ ಗ್ರಾಮ ವ್ಯಾಪ್ತಿಯಲ್ಲಿ ಹಲವು ಮೃತದೇಹಗಳನ್ನು ಹೂತು ಹಾಕಲಾಗಿದೆ ಎನ್ನಲಾದ ಪ್ರಕರಣಕ್ಕೆ ಸಂಬಂಧಿಸಿದಂತೆ ದೂರುದಾರನನ್ನು ವಿಶೇಷ ತನಿಖಾ ದಳ-ಎಸ್.ಐ.ಟಿ ಅಧಿಕಾರಿಗಳು ಬಂಧಿಸಿದ್ದಾರೆ. ಬಳಿಕ ಆತನನ್ನು ಬೆಳ್ತಂಗಡಿ ಸರ್ಕಾರಿ ಆಸ್ಪತ್ರೆಗೆ ಕರೆತಂದು ಆರೋಗ್ಯ ತಪಾಸಣೆ ನಡೆಸಲಾಗಿದೆ. ಮಂಗಳೂರು ಸಕ್ಷಮ ಪ್ರಾಧಿಕಾರದಿಂದ ನಿನ್ನೆ ಸುರಕ್ಷತಾ ಕಾಯ್ದೆಯನ್ನು ರದ್ದು ಮಾಡಿದ್ದು, ಇಂದು ಬೆಳಗ್ಗೆ ದೂರುದಾರನನ್ನು ಬಂಧಿಸಲಾಯಿತು. ಆರೋಗ್ಯ ತಪಾಸಣೆಯ ಬಳಿಕ ದೂರುದಾರನನ್ನು ಬೆಳ್ತಂಗಡಿ ನ್ಯಾಯಾಲಯಕ್ಕೆ ಹಾಜರುಪಡಿಸಲಾಯಿತು. ಬಳಿಕ ನ್ಯಾಯಾಲಯ ದೂರುದಾರನನ್ನು ೧೦ ದಿನಗಳ ಕಾಲ ಎಸ್.ಐ.ಟಿ ವಶಕ್ಕೆ ಒಪ್ಪಿಸಿದೆ. ಈಗಾಗಲೇ ದೂರುದಾರ ಪೊಲೀಸರ ಮುಂದೆ ಹಲವಾರು ವಿಚಾರ ಹೇಳಿಕೊಂಡಿದ್ದು, ಪ್ರಕರಣದ ಬಗ್ಗೆ ಎಸ್.ಐ.ಟಿ ತಂಡ ಮತ್ತೆ ಹೆಚ್ಚಿನ ವಿಚಾರಣೆ ನಡೆಸುವ ನಿರೀಕ್ಷೆಯಿದೆ.

******

ಪ್ರಧಾನಿ ನರೇಂದ್ರ ಮೋದಿ, ಕೇಂದ್ರ ಸಚಿವರಾದ ಅಮಿತ್ ಶಾ, ಕಿರಣ್ ರಿಜಿಜು ಸೇರಿದಂತೆ ಮತ್ತಿತತರ ಗಣ್ಯರು ದೇಶದ ಜನತೆಗೆ ರಾಷ್ಟ್ರೀಯ ಬಾಹ್ಯಾಕಾಶ ದಿನದ ಶುಭಾಶಯ ಕೋರಿದ್ದಾರೆ. ಈ ದಿನದ ಅಂಗವಾಗಿ ಬೆಂಗಳೂರಿನ ಜವಾಹರ್‌ಲಾಲ್ ನೆಹರೂ ತಾರಾಲಯದ ವತಿಯಿಂದ ವಿಶೇಷ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿತ್ತು. ಶಾಲಾ ಮಕ್ಕಳಿಗಾಗಿ, ಚಿತ್ರಕಲಾ ಸ್ಪರ್ಧೆ ಆಶುಭಾಷಣ, ಆರ್ಯಭಟ ಮಾದರಿ ತಯಾರಿಕೆ, ರಸಪ್ರಶ್ನೆ ಮತ್ತು ಜಿಗ್ಸಾ ಪಜಲ್ ಚಟುವಟಿಕೆ ಆಯೋಜಿಸಲಾಗಿತ್ತು.ಚಂದ್ರನ ಕುರಿತ ಪ್ರದರ್ಶನ ಮತ್ತು ಸಾಕ್ಷ್ಯಚಿತ್ರ ಪ್ರದರ್ಶನ ಕೂಡ ಏರ್ಪಡಿಸಲಾಗಿತ್ತು. 'ಚಂದ್ರಯಾನ ಮಿಷನ್‌ನ ಯಶಸ್ಸಿನ ಕುರಿತು ಜವಾಹರ್‌ಲಾಲ್ ನೆಹರೂ ತಾರಾಲಯದ ನಿರ್ದೇಶಕ ಡಾ. ಬಿ.ಆರ್.ಗುರುಪ್ರಸಾದ್ ಮಾತನಾಡಿದರು.

ಧ್ವನಿ: ಡಾ. ಬಿ.ಆರ್.ಗುರುಪ್ರಸಾದ್(೪೭ ಸೆಕೆಂಡ್ಸ್)

ಭಾರತದ ವಿಜ್ಞಾನಿಗಳು ಚಂದ್ರಯಾನ ಕಾರ್ಯಕ್ರಮವನ್ನು ಕಡಿಮೆ ವೆಚ್ಚದಲ್ಲಿ ಪೂರೈಸಿ, ಚಂದ್ರಮನ ಅಂಗಳದಲ್ಲಿ ದಾಖಲೆ ಬರೆದಿದ್ದಾರೆ ಎಂದು ಕ್ಷೇತ್ರ ಸಮನ್ವಯಾಧಿಕಾರಿ ಕುಮಾರ್ ಕೆ.ಎಫ್. ತಿಳಿಸಿದ್ದಾರೆ. ಧಾರವಾಡ ಕರಡಿಗುಡ್ಡ ಗ್ರಾಮದ ಕರ್ನಾಟಕ ಪಬ್ಲಿಕ್ ಶಾಲೆಯ ಪ್ರೌಢಶಾಲಾ ವಿಭಾಗದಲ್ಲಿ ರಾಷ್ಟ್ರೀಯ ಬಾಹ್ಯಾಕಾಶ ದಿನದ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ಈ ಬಾರಿ ಬಾಹ್ಯಾಕಾಶ ದಿನವನ್ನು 'ಭೂತಕಾಲ ಮತ್ತು ಭವಿಷ್ಯದ ಸೇತುವೆ: ಸಾಂಪ್ರದಾಯಿಕ ಖಗೋಳಶಾಸ್ತ್ರವನ್ನು ಗೌರವಿಸುತ್ತಾ, ಆಧುನಿಕ ಬಾಹ್ಯಾಕಾಶ ಸಾಧನೆಗಳ ಪ್ರದರ್ಶನ' ಎಂಬ ಧ್ಯೇಯವಾಕ್ಯದ ಅಡಿಯಲ್ಲಿ ಆಚರಿಸಲಾಗುತ್ತಿದೆ. ಇಂದು ವಿಜ್ಞಾನ ಮತ್ತು ತಂತ್ರಜ್ಞಾನ ಕ್ಷೇತ್ರದಲ್ಲಿ ಅಂತಾರಾಷ್ಟ್ರೀಯ ಮಟ್ಟದಲ್ಲಿ ಭಾರತ ಮುಂಚೂಣಿಯಲ್ಲಿದೆ ಎಂದರು.

******

ತೋಟಗಾರಿಕೆ ಇಲಾಖೆಯ ಸಹಯೋಗದೊಂದಿಗೆ, ನಿಮ್ಹಾನ್ಸ್‌ನ ಮಾನಸಿಕ ಆರೋಗ್ಯ ಶಿಕ್ಷಣ, ಮನೋವೈದ್ಯಕೀಯ ಸಾಮಾಜಿಕ ಕಾರ್ಯ ಮತ್ತು ಕ್ಲಿನಿಕಲ್ ಸೈಕೋಫಾರ್ಮಕಾಲಜಿ ಹಾಗೂ ನ್ಯೂರೋಟಾಕ್ಸಿಕಾಲಜಿ ವಿಭಾಗಗಳು ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ಇಂದು ಸಮುದಾಯ ಸಂಪರ್ಕ ೨೦೨೫ರ ಎರಡನೇ ಅಧಿವೇಶನ ನಡೆಯಿತು. 'ಡಿಸ್‌ಕನೆಕ್ಟ್ ಟು ರಿಕನೆಕ್ಟ್: ಫೈಂಡಿಂಗ್ ಬ್ಯಾಲೆನ್ಸ್ ಇನ್ ಎ ಡಿಜಿಟಲ್ ವರ್ಲ್ಡ್' ಎಂಬ ವಿಷಯದ ಕಾರ್ಯಕ್ರಮವು ಡಿಜಿಟಲ್ ಅತಿಯಾದ ಬಳಕೆಯ ಹೆಚ್ಚುತ್ತಿರುವ ಸವಾಲುಗಳ ಬಗ್ಗೆ ಜಾಗೃತಿ ಮೂಡಿಸುವುದು ಮತ್ತು ತಂತ್ರಜ್ಞಾನದೊಂದಿಗೆ ಆರೋಗ್ಯಕರ ಸಂಬಂಧಗಳನ್ನು ಪ್ರೋತ್ಸಾಹಿಸುವ ಗುರಿಯನ್ನು ಹೊಂದಿದೆ. ಈ ಕುರಿತು ನಿಮ್ಹಾನ್ಸ್‌ನ ಸೆಂಟರ್ ಫಾರ್ ವೆಲ್-ಬೀಯಿಂಗ್‌ನ ಕ್ಲಿನಿಕಲ್ ಸೈಕಾಲಜಿ ಪ್ರಾಧ್ಯಾಪಕ ಡಾ. ಮನೋಜ್ ಕುಮಾರ್ ಶರ್ಮಾ ಮಾಹಿತಿ ನೀಡಿದರು. ಮುಂದಿನ ಸಮುದಾಯ ಸಂಪರ್ಕ ಕಾರ್ಯಕ್ರಮವು ಇದೇ ಸೆಪ್ಟೆಂಬರ್ ೨೦ ರಂದು ಲಾಲ್‌ಬಾಗ್‌ನಲ್ಲಿ ವಿಶ್ವ ಆತ್ಮಹತ್ಯೆ ತಡೆಗಟ್ಟುವ ದಿನದ ವಿಷಯವಾಗಿ ನಡೆಯಲಿದೆ.

******

ಉಡುಪಿ ಜಿಲ್ಲೆಯಲ್ಲಿ ಪ್ರಸಕ್ತ ಸಾಲಿನ ಸ್ವರ್ಣಗೌರಿ ಹಾಗೂ ವರಸಿದ್ಧಿ ವಿನಾಯಕ ಚತುರ್ಥಿ ಹಬ್ಬವು ಸಮೀಪಿಸುತ್ತಿದ್ದು, ಈ ಸಂದರ್ಭದಲ್ಲಿ ಸಾರ್ವಜನಿಕರು ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣದ ವಿಗ್ರಹಗಳನ್ನು ಕೆರೆ, ಬಾವಿ ಹಾಗೂ ಇನ್ನಿತರ ನೈಸರ್ಗಿಕ ಜಲಮೂಲಗಳಲ್ಲಿ ವಿಸರ್ಜಿಸುವುದರಿಂದ ನೈಸರ್ಗಿಕ ಜಲಮೂಲಗಳು ಕಲುಷಿತಗೊಂಡು ಅವುಗಳ ಭೌತಿಕ ಹಾಗೂ ರಾಸಾಯನಿಕ ಸ್ಥಿತಿಗಳ ಬದಲಾವಣೆಯಿಂದ ಪರಿಸರದ ಮೇಲೆ ದುಷ್ಪರಿಣಾಮ ಉಂಟಾಗುವುದಲ್ಲದೇ ಪ್ರಾಣಿ, ಪಕ್ಷಿ ಹಾಗೂ

ಇತರೇ ಜಲಚರಗಳ ಜೀವಕ್ಕೆ ಅಪಾಯವಾಗುತ್ತದೆ. ಅಲ್ಲದೇ ಇಂತಹ ಕಲುಷಿತ ನೀರಿನಿಂದ ಸಾರ್ವಜನಿಕ ಆರೋಗ್ಯಕ್ಕೂ ಹಾನಿ ಉಂಟಾಗುತ್ತದೆ. ಉಚ್ಚ ನ್ಯಾಯಾಲಯದ ಆದೇಶದಂತೆ ಮತ್ತು ಕರ್ನಾಟಕ ರಾಜ್ಯ ಮಾಲಿನ್ಯ ನಿಯಂತ್ರಣ ಮಂಡಳಿಯ ಸುತ್ತೋಲೆ ಅನ್ವಯ ಹಬ್ಬದ ಆಚರಣೆಯಿಂದ ಉಂಟಾಗುವ ಮಾಲಿನ್ಯದಿಂದ ನೈಸರ್ಗಿಕ ಜಲ ಮೂಲಗಳನ್ನು ಸಂರಕ್ಷಿಸುವ ನಿಟ್ಟಿನಲ್ಲಿ ಪ್ಲಾಸ್ಟರ್ ಆಫ್ ಪ್ಯಾರಿಸ್ ಮತ್ತು ಬಣ್ಣ ಲೇಪಿತವಾದ ಗೌರಿ ಮತ್ತು ಗಣೇಶ ವಿಗ್ರಹಗಳನ್ನು ರಾಜ್ಯದ ಯಾವುದೇ ಕೆರೆ, ಬಾವಿ, ಕಟ್ಟೆ ಮತ್ತು ಇತರೆ ಜಲಮೂಲಗಳಲ್ಲಿ ವಿಸರ್ಜಿಸುವುದನ್ನು ನಿಷೇಧಿಸಲಾಗಿದೆ. ಆದ್ದರಿಂದ ಸಾರ್ವಜನಿಕರು ಪರಿಸರಸ್ನೇಹಿ ಗೌರಿ-ಗಣೇಶ ಹಬ್ಬವನ್ನು ಆಚರಿಸಿ, ನೈಸರ್ಗಿಕ ಜಲ ಸಂಪನ್ಮೂಲಗಳನ್ನು ಸಂರಕ್ಷಿಸಲು ಸಹಕರಿಸುವಂತೆ ಜಿಲ್ಲಾಡಳಿತ ಮನವಿ ಮಾಡಿದೆ. ಕಾರವಾರ ಜಿಲ್ಲೆಯಲ್ಲಿ ಆಗಸ್ಟ್ ೨೭ ರಂದು ಆಚರಿಸುವ ಗಣೇಶ ಚತುರ್ಥಿ ಹಬ್ಬ ಹಾಗೂ ಮತ್ತು ಸೆಪ್ಟಂಬರ್ ೫ ರ ಈದ್ ಮಿಲಾದ್ ಹಬ್ಬವನ್ನು ಶಾಂತಿ ಮತ್ತು ಸೌಹಾರ್ದಯುತವಾಗಿ ಹಾಗೂ ಪರಿಸರ ಸ್ನೇಹಿಯಾಗಿ ಆಚರಣೆ ಮಾಡುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಕೆ.ಲಕ್ಷ್ಮಿಪ್ರಿಯಾ ಮನವಿ ಮಾಡಿದ್ದಾರೆ. ಕಾರವಾರದ ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ಇಂದು ಎಲ್ಲಾ ಸಮುದಾಯ ಮುಖಂಡರೊಂದಿಗೆ ಆಯೋಜಿಸಿದ್ದ ಸೌಹಾರ್ದ ಸಭೆಯ ಅಧ್ಯಕ್ಷತೆ ವಹಿಸಿ ಅವರು ಮಾತನಾಡಿದರು. ಗಣೇಶ ಮೂರ್ತಿಗಳನ್ನು ಪ್ರತಿಷ್ಠಾಪಿಸುವಾಗ ಮಣ್ಣಿನಿಂದ ತಯಾರಿಸಿದ ಗಣೇಶ ಮೂರ್ತಿಗಳನ್ನು ಮಾತ್ರ ಪ್ರತಿಷ್ಠಾಪಿಸಬೇಕು. ಪಿಓಪಿ ಮತ್ತು ರಾಸಾಯನಿಕ ಬಣ್ಣಗಳನ್ನು ಬಳಸಿರುವ ಗಣೇಶ ಮೂರ್ತಿಗಳ ಪ್ರತಿಷ್ಠಾಪನೆಗೆ ಅವಕಾಶವಿಲ್ಲ. ಗಣೇಶ ಪ್ರತಿಷ್ಠಾಪನೆ ಸ್ಥಳದಲ್ಲಿ ಮತ್ತು ವಿಸರ್ಜನೆ ಸಮಯದಲ್ಲಿ ಯಾವುದೇ ರೀತಿಯ ಏಕ ಬಳಕೆಯ ಪ್ಲಾಸ್ಟಿಕ್ ವಸ್ತುಗಳ ಬಳಕೆ ಆಗದಂತೆ ನೋಡಿಕೊಳ್ಳಬೇಕು. ಪೆಂಡಾಲ್‌ಗಳ ನಿರ್ಮಾಣ ಮತ್ತು ಅಲಂಕಾರದಲ್ಲಿಯೂ ಪ್ಲಾಸ್ಟಿಕ್ ಬಳಕೆ ಮಾಡಬಾರದು ಎಂದು ಜಿಲ್ಲಾಧಿಕಾರಿ ನಿರ್ದೇಶಿಸಿದರು.

******

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರ ತಾಲೂಕಿನ ಬಾಶೆಟ್ಟಿಹಳ್ಳಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಭಾರತೀಯ ಸ್ಟೇಟ್ ಬ್ಯಾಂಕ್, ಕೈಗಾರಿಕಾ ಪ್ರದೇಶ ಶಾಖೆ ಹಾಗೂ ಕೇಂದ್ರ ಹಣಕಾಸು ಸೇವೆಗಳ ಇಲಾಖೆ ಸಹಯೋಗದಲ್ಲಿ ಹಣಕಾಸು ಸೇರ್ಪಡೆ ಪರಿಪೂರ್ಣತೆ ಜನಸುರಕ್ಷಣಾ ಅಭಿಯಾನ ಹಮ್ಮಿಕೊಳ್ಳಲಾಗಿತ್ತು. ಭಾರತೀಯ ಸ್ಟೇಟ್ ಬ್ಯಾಂಕ್‌ನ ಉಪ ವ್ಯವಸ್ಥಾಪಕ ನಿರ್ದೇಶಕ ವಿನೋದ್ ಕುಮಾರ್ ಮಿಶ್ರಾ ಮಾತನಾಡಿ, ಕೇಂದ್ರ ಸರ್ಕಾರದ ಸಾಮಾಜಿಕ ಭದ್ರತಾ ಯೋಜನೆಗಳ ಸದುಪಯೋಗವನ್ನು ಜನಸಾಮಾನ್ಯರು ಪಡೆದುಕೊಳ್ಳಬೇಕಿದೆ. ಅಂತೆಯೇ ಡಿಜಿಟಲ್ ವಂಚನೆಗಳಿಂದ ಪಾರಾಗುವ ಕುರಿತು ಅರಿವು ಮೂಡಿಸಿಕೊಳ್ಳಬೇಕಿದೆ ಎಂದು ಹೇಳಿದರು. ಈ ದಿಸೆಯಲ್ಲಿ ರಾಷ್ಟ್ರವ್ಯಾಪಿ ಹಣಕಾಸು ಸೇರ್ಪಡೆ ಉಪಕ್ರಮಕ್ಕೆ ಪೂರಕವಾಗಿ ಪ್ರಮುಖ ಹಣಕಾಸು ಸೇರ್ಪಡೆ ಪರಿಪೂರ್ಣತೆ ಅಭಿಯಾನವನ್ನು ರೂಪಿಸಲಾಗುತ್ತಿದೆ. ಅಭಿಯಾನದಲ್ಲಿ ಪ್ರಧಾನ ಮಂತ್ರಿ ಜನ್ ಧನ್ ಯೋಜನೆ, ಪ್ರಧಾನ ಮಂತ್ರಿ ಜೀವನ್ ಜ್ಯೋತಿ ಬಿಮಾ ಯೋಜನೆ, ಪ್ರಧಾನ ಮಂತ್ರಿ ಸುರಕ್ಷಾ ಬಿಮಾ ಯೋಜನೆ, ಮತ್ತು ಅಟಲ್ ಪಿಂಚಣಿ ಯೋಜನೆಯಂತಹ ಮಂತ್ರಿ ಸಾಮಾಜಿಕ ಭದ್ರತಾ ಯೋಜನೆಗಳ ಬಗ್ಗೆ ಜಾಗೃತಿ ಮೂಡಿಸಲಾಗುತ್ತಿದೆ ಎಂದರು.

******

ಡಾ.ಎಚ್.ನರಸಿಂಹಯ್ಯ ಅಭಿವೃದ್ಧಿ ಪ್ರಾಧಿಕಾರದ ವತಿಯಿಂದ ಗೌರಿಬಿದನೂರು ತಾಲೂಕಿನ ನಿರುದ್ಯೋಗಿ ಯುವಜನರಿಗಾಗಿ ನಾಳೆ ಸಮಾನತಾ ಸೌಧದಲ್ಲಿ ಬೃಹತ್ ಉದ್ಯೋಗ ಮೇಳವನ್ನು ಹಮ್ಮಿಕೊಂಡಿದ್ದು, ಬೆಂಗಳೂರು ಸೇರಿದಂತೆ ವಿವಿಧೆಡೆಗಳಿಂದ ಸುಮಾರು ೭೫ ಪ್ರತಿಷ್ಠಿತ ಕಂಪನಿಗಳು ಪಾಲ್ಗೊಳ್ಳಲಿವೆ. ಆಸಕ್ತ ವಿದ್ಯಾವಂತ ನಿರುದ್ಯೋಗಿ ಯುವಜನರು ಆಧಾರ್ ಗುರುತಿನ ಚೀಟಿ, ಅಂಕಪಟ್ಟಿ ಮತ್ತಿತರ ದಾಖಲೆಗಳೊಂದಿಗೆ ಉದ್ಯೋಗ ಮೇಳದಲ್ಲಿ ನೇರವಾಗಿ ಭಾಗವಹಿಸುವ ಮೂಲಕ ಮೇಳದ ಪ್ರಯೋಜನ ಪಡೆದುಕೊಳ್ಳಬೇಕೆಂದು ಡಾ.ಹೆಚ್.ಎನ್.ಅಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎನ್.ಹೆಚ್.ಶಿವಶಂಕರರೆಡ್ಡಿ ತಿಳಿಸಿದ್ದಾರೆ.

*****END*****